1

# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಮಾನ್ಯ ಸದಸ್ಯರ ಹೆಸರು | ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 955 |
| ಉತ್ತರಿಸಬೇಕಾದ ದಿನಾಂಕ | 13.12.2023 |
| ಉತ್ತರಿಸಬೇಕಾದ ಸಚಿವರು | ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 2023 ನೇ ಸಾಲಿನ ಮುಖ್ಯ ಮಂತ್ರಿಗಳ 1 ಲಕ್ಷ ವಸತಿ ಯೋಜನೆ ಅಡಿಯಲ್ಲಿ ಎಷ್ಟು ಫಲಾನುಭವಿಗಳಿಗೆ ವಸತಿಯನ್ನು ಹಂಚಿಕೆ ಮಾಡಲಾಗಿದೆ; ಈಗಾಗಲೇ ಹಂಚಿಕೆಯಾಗಿರುವ ಫಲಾನುಭವಿಗಳ ವಿವರ ನೀಡುವುದು; | "1 ಲಕ್ಷ ಬಹುಮಹಡಿ ಬೆಂಗಳೂರು ವಸತಿ ಯೋಜನೆಯಡಿ" ಅರ್ಜಿ ಸಲ್ಲಿಸಿರುವ ಫಲಾನುಭವಿಗಳು ಆರಂಭಿಕ ಠೇವಣಿಯನ್ನು ಪಾವತಿಸಿದ ನಂತರ ಫಲಾನುಭವಿಗಳೇ ಸ್ವತ: ತಮ್ಮ ಫ್ಲಾಟ್‌ಗಳನ್ನು ಆಯ್ಕೆ ಮಾಡಿ ಕೊಳ್ಳಲು ಆನ್-ಲೈನ್ ನಲ್ಲಿ ಅವಕಾಶ ಕಲ್ಪಿಸಲಾಗಿದ್ದು, ಅದರಂತೆ ಆರಂಭಿಕ ಠೇವಣಿಯನ್ನು ಪಾವತಿಸಿ, ದಿನಾಂಕ: 23.11.2023 ರವರೆಗೆ ಫ್ಲಾಟ್‌ಗಳನ್ನು ಆಯ್ಕೆ ಮಾಡಿ ಕೊಂಡಿರುವ ಫಲಾನುಭವಿಗಳ ವಿವರ ಈ ಕೆಳಗಿನಂತಿದೆ.<br><br>1 ಬಿ.ಹೆಚ್.ಕೆ. — 11,098<br>2 ಬಿ.ಹೆಚ್.ಕೆ. — 470<br>**ಒಟ್ಟು — 11,568**<br><br>ಫಲಾನುಭವಿವಾರು ವಿವರಗಳನ್ನು ಅನುಬಂಧ-1 & 2 ರಲ್ಲಿ ಹಾಗೂ C.D. ಮೂಲಕ ಒದಗಿಸಲಾಗಿದೆ. |
| ಆ) | ಸರ್ಕಾರಿ ನೌಕರರು ಈ ಯೋಜನೆಗೆ ಅರ್ಹತೆ ಹೊಂದಿದ್ದಾರೆಯೇ; | ಹೌದು.<br><br>ಈ ಯೋಜನೆಯಡಿ ಸರ್ಕಾರಿ ನೌಕರರು ಕೆಳಕಂಡ ಅರ್ಹತೆಗಳನ್ನು ಹೊಂದಿದ್ದಲ್ಲಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ.<br><br>1. 1 ಬಿ.ಹೆಚ್.ಕೆ. ಫ್ಲಾಟ್ ಅನ್ನು ಪಡೆಯಲು ಅರ್ಜಿದಾರರ ಕುಟುಂಬದ ಗರಿಷ್ಠ ವಾರ್ಷಿಕ ಆದಾಯ ರೂ. 3.00 ಲಕ್ಷಗಳು ಹಾಗೂ 2 ಬಿ.ಹೆಚ್.ಕೆ ಫ್ಲಾಟ್ ಅನ್ನು ಪಡೆಯಲು ಕುಟುಂಬದ ಗರಿಷ್ಠ ವಾರ್ಷಿಕ ಆದಾಯ ರೂ. 6.00 ಲಕ್ಷಗಳ ಮಿತಿಯೊಳಗಿರಬೇಕು.<br>2. ಬೆಂಗಳೂರು ನಗರ ಜಿಲ್ಲೆಯ ವ್ಯಾಪ್ತಿಯಲ್ಲಿ ಕನಿಷ್ಠ 5 ವರ್ಷಗಳಿಂದ ವಾಸಿಸುತ್ತಿರಬೇಕು.<br>3. ವಸತಿ ರಹಿತರಾಗಿರಬೇಕು.<br>4. ಸರ್ಕಾರದ ಬೇರೆ ಯಾವುದೇ ವಸತಿ ಯೋಜನೆಯಡಿ ಫಲಾನುಭವಿಯಾಗಿರಬಾರದು.<br>5. ಆಧಾರ್ ಕಾರ್ಡ್ ಹಾಗೂ ಪಡಿತರ ಚೀಟಿ ಮತ್ತು ಚುನಾವಣಾ ಗುರುತಿನ ಚೀಟಿ, ವಿಕಲಚೇತನ ಗುರುತಿನ ಚೀಟಿ ಹಾಗೂ ಕಾರ್ಮಿಕರ ಗುರುತಿನ ಚೀಟಿಯನ್ನು ಹೊಂದಿರಬೇಕು. |

| | | |
|---|---|---|
| ಇ) | ಪ್ರಸಕ್ತ ಸಾಲಿನಲ್ಲಿ ನಿವೇಶನ ಇಲ್ಲದವರಿಗೆ ಸರ್ಕಾರದ ವತಿಯಿಂದ ಖಾಲಿ ನಿವೇಶನ ಹಂಚಿಕೆ ಮಾಡಲಾಗಿದೆಯೇ ? | "1 ಲಕ್ಷ ಬಹುಮಹಡಿ ಬೆಂಗಳೂರು ವಸತಿ ಯೋಜನೆಯಡಿ " 1 ಬಿ.ಹೆಚ್.ಕೆ/ 2 ಬಿ.ಹೆಚ್.ಕೆ. ಫ್ಲಾಟ್‌ಗಳನ್ನು ಮಾತ್ರ ನಿರ್ಮಿಸಿ ಕೊಡಲಾಗುತ್ತಿದ್ದು, ಈ ಯೋಜನೆಯಡಿ ಯಾವುದೇ ಖಾಲಿ ನಿವೇಶನ ಹಂಚಿಕೆಗೆ ಅವಕಾಶವಿರುವುದಿಲ್ಲ. |

ಸಂಖ್ಯೆ :ವಇ 170 ಹೆಚ್‌ಎಫ್‌ಎ 2023

(ಬಿ.ಜೆಡ್.ಜಮೀರ್ ಅಹ್ಮದ್ ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣಸಚಿವರು